ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು


| ಸಂಪುಟ –೧೬೧<br>Volume - 161 | ಬೆಂಗಳೂರು, ಗುರುವಾರ, ೧೭, ಸೆಪ್ಟೆಂಬರ್, ೨೦೨೬ (ಭಾದ್ರಪದ ೨೬, ಶಕವರ್ಷ, ೧೯೪೮)<br>BENGALURU, THURSDAY, 17, SEPTEMBER, 2026 ( BHADRAPADA 26, SHAKAVARSHA, 1948) | ಸಂಚಿಕೆ ೧೮೦<br>Issue 180 |
|---|---|---|


## ಭಾಗ ೧

## ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

### ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಕಗ್ಗಲೀಪುರ ಗ್ರಾಮದ ಸರ್ವೆ ನಂ. 46 ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಆರ್ಟ್ ಆಫ್ ಲಿವಿಂಗ್ ಮತ್ತು ಅದರ ಅಂಗಸಂಸ್ಥೆಗಳು, ವೇದ ವಿಜ್ಞಾನ ಮಹಾ ವಿದ್ಯಾಪೀಠ ಇನ್‌ಸ್ಟಿಟ್ಯೂಟ್, ಸುಮೇರು ಗ್ಲೋಬಲ್ ಸಪೋರ್ಟ್ ಸಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್, ಸುಮೇರು ರಿಯಾಲ್ಟಿ ಪ್ರೈ. ಲಿ. ಹಾಗೂ ರಿಟ್ ಅರ್ಜಿ ಸಂಖ್ಯೆ 15264/2023ರ ಇತರೆ ಪಕ್ಷಕಾರರು ಮತ್ತು ಸರ್ಕಾರಿ ಜಮೀನುಗಳನ್ನು ವಶದಲ್ಲಿಟ್ಟುಕೊಂಡಿರುವ ಇತರೆ ವ್ಯಕ್ತಿಗಳು/ಸಂಸ್ಥೆಗಳಿಂದ ಆಗಿರುವ ಭೂ ಒತ್ತುವರಿಯ ಕುರಿತು ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಲು 'ವಿಶೇಷ ತನಿಖಾ ತಂಡ'ವನ್ನು ರಚಿಸುವ ಕುರಿತು.

**ಓದಲಾಗಿದೆ:** ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇವರ ಪತ್ರ ಸಂಖ್ಯೆ: RCB/LND/CR/79/2025-26, Dated: 07.07.2026.

* * *

**ಪ್ರಸ್ತಾವನೆ:**

ಮೇಲೆ ಓದಲಾದ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇವರ ಪ್ರಸ್ತಾವನೆಯಲ್ಲಿ ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕಗ್ಗಲೀಪುರ, ಬಿ.ಎಂ. ಕಾವಲ್, ಅಗರಾ ಮತ್ತು ಉತ್ತರಿ ಗ್ರಾಮಗಳಲ್ಲಿ, ನ್ಯಾಯಾಲಯದ ನಿರ್ದೇಶನಗಳ ಮೇರೆಗೆ ಅಕ್ಟೋಬರ್ 2025ರಲ್ಲಿ ಸಹಾಯಕ ಭೂದಾಖಲೆಗಳ ನಿರ್ದೇಶಕರು (ಎ.ಡಿ.ಎಲ್.ಆರ್) ಅವರು ನಡೆಸಿದ ಸಮೀಕ್ಷೆಯಿಂದ ಮೇಲ್ನೋಟಕ್ಕೆ ಕಂಡುಬಂದಿರುವುದೇನೆಂದರೆ; 1981ರಲ್ಲಿ ಸ್ಥಾಪಿತವಾದ ಹಾಗೂ ಬೆಂಗಳೂರಿನಲ್ಲಿ ಪ್ರಧಾನ ಕಚೇರಿಯನ್ನು ಹೊಂದಿರುವ ಜಾಗತಿಕ, ಸ್ವಯಂಸೇವಕ